ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS** 6

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 07/09/202

# ಕೇಶವಾನಂದ ಭಾರತಿ ನಿಧನ

ಮಂಗಳೂರು: ಕಾಸರಗೋಡು ಜಿಲ್ಲೆಯ ಎಡನೀರು ಜಗದ್ಗುರು ಶಂಕರಾಚಾರ್ಯ ಸಂಸ್ಥಾನದ ಮಠಾಧೀಶ ಕೇಶವಾನಂದ ಭಾರತಿ ಸ್ವಾಮೀಜಿ (79) ಶನಿವಾರ ಮಧ್ಯರಾತ್ರಿ ದೈವಾಧೀನರಾದರು. ಕೆಲವು ದಿನಗಳಿಂದ ಅನಾರೋಗ್ಯದಿಂದ ಬಳಲುತ್ತಿದ್ದ ಅವರು ಇದೇ 2ರಂದು ಚಾತುರ್ಮಾಸ್ಯವನ್ನು ಪೂರೈಸಿದ್ದರು.



ಅವರು ಗಡಿನಾಡಿನ ಸಂಸ್ಥಾನವನ್ನು ಯಕ್ಷಗಾನ, ಸಂಗೀತದ ಕೇಂದ್ರವನ್ನಾಗಿಸಿದ್ದರು. ಯಕ್ಷಗಾನ ಕಲೆಯ ಮೇಲೆ ಅತೀವ ಪ್ರೇಮ ಹೊಂದಿದ್ದು, ಮೇಳವನ್ನು ಮುನ್ನಡೆಸುತ್ತಾ ಸ್ವತಃ ಭಾಗವತಿಕೆಯನ್ನೂ ಮಾಡುತ್ತಿದ್ದರು. ಪ್ರತಿ ವರ್ಷ ಯಕ್ಷಗಾನ ಸಪ್ತಾಹ, ತಾಳಮದ್ದಳೆ ಕೂಟಗಳನ್ನು ನಡೆಸುತ್ತಿದ್ದರು.

ಕೇರಳ ಸರ್ಕಾರದ ವಿರುದ್ಧ ಅವರು ಹೂಡಿದ್ದ ದಾವೆಯು 'ಕೇಶವಾನಂದ ಭಾರತಿ ವರ್ಸಸ್ ಕೇರಳ ಸರ್ಕಾರ ಪ್ರಕರಣ' ಎಂದೇ ಪ್ರಸಿದ್ಧವಾಗಿದೆ.

ಇನ್ನೊಂದು ಸುದ್ದಿ 5